ದಿ:- 18-08-26ರ ಉತ್ತರ ಕ್ರ.ಸಂ:-5

**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ</u>**

**ಪ್ರಶ್ನೆ:** ರಾಜ್ಯದಲ್ಲಿ ಪ್ರತಿ ವರ್ಷ ಸರಾಸರಿ 2,000ಕ್ಕೂ ಅಧಿಕ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ದಾಖಲಾಗುತ್ತಿದ್ದು, ಮೂರು ವರ್ಷಗಳಲ್ಲಿ 327 ದಲಿತರ ಹತ್ಯೆ ಹಾಗೂ 620 ದಲಿತ ಮಹಿಳೆಯರ ಮೇಲೆ ಅತ್ಯಾಚಾರ ಪ್ರಕರಣಗಳು ವರದಿಯಾಗಿರುವ ತೀವ್ರ ಕಳವಳಕಾರಿ ಸಂಗತಿ ದಿನಾಂಕ 18.08.2026ರ ವಾರ್ತಾ ಭಾರತಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

2023 ರಿಂದ 2026ರ ಜೂನ್ ಅಂತ್ಯದವರೆಗೆ ರಾಜ್ಯಾದ್ಯಂತ ಒಟ್ಟು 8,069 ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ. 2023ರಲ್ಲಿ 2,142 ಪ್ರಕರಣಗಳು 2024ರಲ್ಲಿ 2,121 ಪ್ರಕರಣಗಳು 2025ರಲ್ಲಿ 2,411 ಪ್ರಕರಣಗಳು, 2026 (ಜೂನ್‌ವರೆಗೆ) 1,395 ಪ್ರಕರಣಗಳು ವರದಿಯಾಗಿರುವುದು ತಿಳಿದುಬಂದಿರುತ್ತದೆ. ಈ ಪೈಕಿ 4,643 ಪ್ರಕರಣಗಳ ವಿಚಾರಣೆಯೇ ನಡೆಯದಿರುವುದು, ಅಪರಾಧಿಗಳ ಬಂಧನ ಹಾಗೂ ಪ್ರಕರಣಗಳ ವಿಲೇವಾರಿ ದರ ಅತ್ಯಂತ ಕಡಿಮೆಯಿದ್ದು, ನೂರಾರು ಪ್ರಕರಣಗಳು ತನಿಖೆಯ ಹಂತದಲ್ಲೇ ಬಾಕಿ ಉಳಿದಿವೆ. ನೈಜ ಸಂತ್ರಸ್ತರಿಗೆ ತ್ವರಿತ ನ್ಯಾಯ ಸಿಗುವಲ್ಲಿ ಮತ್ತು ಕಾಯ್ದೆಯ ದುರುಪಯೋಗ ತಡೆಯುವಲ್ಲಿ ಸೂಕ್ತ ಮೇಲ್ವಿಚಾರಣೆಯ ಅಗತ್ಯವಿದೆ.

ಬಾಕಿ ಇರುವ ಪ್ರಕರಣಗಳಿಗೆ ನಿಗದಿತ ಕಾಲಮಿತಿಯಲ್ಲಿ ನ್ಯಾಯ ದೊರಕಿಸಲು ವಿಶೇಷ ನ್ಯಾಯಾಲಯಗಳನ್ನು (Fast-track Courts) ಸಕ್ರಿಯಗೊಳಿಸಬೇಕು. ದೌರ್ಜನ್ಯ ತಡೆ ಕಾಯ್ದೆ (SC/ST Act) ಅಡಿಯಲ್ಲಿ ದಾಖಲಾಗುವ ದೂರುಗಳ ತನಿಖೆಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು, ಜಿಲ್ಲಾಮಟ್ಟದ ಉಸ್ತುವಾರಿ ಸಮಿತಿಗಳು ನಿಯಮಿತವಾಗಿ ಸಭೆ ನಡೆಸಿ, ಸಂತ್ರಸ್ತ ಕುಟುಂಬಗಳಿಗೆ ರಕ್ಷಣೆ ಹಾಗೂ ಕಾನೂನು ನೆರವು ಒದಗಿಸಲು ಕ್ರಮ ಕೈಗೊಳ್ಳಬೇಕೆಂಬುದರ ಕುರಿತು.

**ಉತ್ತರ:** ರಾಜ್ಯಾದ್ಯಂತ ಕಳೆದ ಮೂರು ವರ್ಷಗಳಲ್ಲಿ ಎಸ್.ಸಿ/ಎಸ್.ಟಿ ರವರ ಮೇಲಿನ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಪ್ರಕರಣಗಳು ದಾಖಲಾಗಿರುತ್ತವೆ.

| ವರ್ಷ | ಪೊಲೀಸ್ ಐಟಿ ತಂತ್ರಾಂಶದಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ |
|---|---|
| 2023 | 2160 |
| 2024 | 2114 |
| 2025 | 2409 |
| 2026 (30.06.2026) | 1396 |

ರಾಜ್ಯದಲ್ಲಿ ಎಸ್.ಸಿ/ಎಸ್.ಟಿ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಲು ಪ್ರತ್ಯೇಕವಾಗಿ 33 ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು 3 ಹಂತದಲ್ಲಿ ದಿನಾಂಕ:12.06.2025, 27.06.2025 ಮತ್ತು 18.08.2025ರಲ್ಲಿ ಸ್ಥಾಪಿಸಲಾಗಿರುತ್ತದೆ.

ರಾಜ್ಯದಲ್ಲಿ ದಾಖಲಾಗುವ ಎಸ್.ಸಿ/ಎಸ್.ಟಿ ರವರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಪೊಲೀಸ್ ಅಧಿಕಾರಿಗಳು ತ್ವರಿತವಾಗಿ ತನಿಖೆಯನ್ನು ಕೈಗೊಂಡು, ತನಿಖೆಯನ್ನು ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ 60 ದಿನದೊಳಗಾಗಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲು ಕ್ರಮಕೈಗೊಳ್ಳುವಂತೆ ಸುತ್ತೋಲೆ ಸಂಖ್ಯೆ: ಕಾಮತ್ತುಸು(7)/38/2023-24, ದಿನಾಂಕ:29.01.2025ರಲ್ಲಿ ಎಲ್ಲಾ ಘಟಕಾಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗಿರುತ್ತದೆ.

ವಿಶೇಷವಾಗಿ ಎಸ್.ಸಿ/ಎಸ್.ಟಿ ದೌರ್ಜನ್ಯ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ನಡೆಸಿ ನಿಗದಿತ ಕಾಲಮಿತಿಯಲ್ಲಿ ಸಂತ್ರಸ್ಥರಿಗೆ ನ್ಯಾಯ ದೊರಕಿಸಿಕೊಡಲು ರಾಜ್ಯಾದ್ಯಂತ ವಿಶೇಷ ನ್ಯಾಯಾಲಯಗಳು ಈಗಾಗಲೇ ಕಾರ್ಯನಿರ್ವಹಿಸುತ್ತಿರುತ್ತವೆ.

ಎಸ್‌ಸಿ/ಎಸ್‌ಟಿ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಗಳು ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಿಯಮಿತವಾಗಿ ಮಾಸಿಕ ಸಭೆಗಳನ್ನು ನಡೆಸಿ, ಸಂತ್ರಸ್ಥ ಕುಟುಂಬಗಳಿಗೆ ರಕ್ಷಣೆ ಹಾಗೂ ಕಾನೂನು ನೆರವು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: ಹೆಚ್‌ಡಿ 31 ಎಸ್‌ಡಿಎಸ್ 2026**

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು